ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 864 (1120)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ವಿಷಯ : ರಾಜ್ಯದಲ್ಲಿ ಒಂದೇ ನೋಂದಣಿಯಡಿಯಲ್ಲಿ ಒಂದಕ್ಕಿಂತ ಹೆಚ್ಚು ಬಸ್‌ಗಳನ್ನು ಓಡಿಸುತ್ತಿರುವ ಬಗ್ಗೆ

(ಅ) ರಾಜ್ಯದಲ್ಲಿ ತೆರಿಗೆ ವಂಚಿಸುವ ನಿಟ್ಟಿನಲ್ಲಿ ನಕಲಿ ನೋಂದಣಿ ಸಂಖ್ಯೆ ಅಳವಡಿಸಿಕೊಂಡು ಬಸ್‌ಗಳನ್ನು ಓಡಿಸುತ್ತಿರುವ ಅನೇಕ ಪ್ರಕರಣಗಳ ಬಗ್ಗೆ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಂದೇ ನೋಂದಣಿಯಡಿಯಲ್ಲಿ ಎರಡಕ್ಕಿಂತ ಹೆಚ್ಚು ಬಸ್ಸುಗಳನ್ನು ಓಡಿಸುತ್ತಿರುವ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆಯೇ ;

(ಇ) ಇಂತಹ ಪ್ರಕರಣಗಳನ್ನು ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಬೆಳಗಾವಿ ಜಿಲ್ಲೆಯಲ್ಲಿ ಇಂತಹ ಯಾವುದಾದರೂ ಪ್ರಕರಣಗಳು ದಾಖಲಾಗಿವೆಯೇ ? (ವಿವರ ನೀಡುವುದು)